## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 71 |
| ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 13.02.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಪರವಾನಗಿ ಪಡೆದ ಎಷ್ಟು ಗಣಿಗಾರಿಕೆಗಳು ಚಾಲ್ತಿಯಲ್ಲಿದೆ; | ವಿಜಯಪುರ ಜಿಲ್ಲೆಯಲ್ಲಿ ಮುಖ್ಯ ಖನಿಜ, ಅಲಂಕಾರಿಕ ಶಿಲೆ ಮತ್ತು ಮರಳು ಗಣಿಗಾರಿಕೆಗೆ ಯಾವುದೇ ಗುತ್ತಿಗೆಗಳನ್ನು ಮಂಜೂರು ಮಾಡಿರುವುದಿಲ್ಲ.<br>ಕಟ್ಟಡ ಕಲ್ಲುಗಣಿಗಾರಿಕೆಗೆ 49 ಗುತ್ತಿಗೆಗಳನ್ನು 165-33 ಎಕರೆ ಪ್ರದೇಶದಲ್ಲಿ ಮಂಜೂರು ಮಾಡಲಾಗಿದ್ದು, ಪ್ರಸ್ತುತ ಚಾಲ್ತಿಯಲ್ಲಿರುತ್ತವೆ. |
| ಆ) | ಎಷ್ಟು ಗಣಿಗಾರಿಕೆಗಳು ಅಕ್ರಮವಾಗಿ ನಡೆಯುತ್ತಿವೆ; (ವಿವರ ನೀಡುವುದು) | ವಿಜಯಪುರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ 51 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿರುತ್ತದೆ.<br>ಅಕ್ರಮ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ:<br>ಅಕ್ರಮ ಕಲ್ಲು ಗಣಿಗಾರಿಕೆ:- |

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (₹ ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2021-22 | 1 | 0.50 | - |
| 2. | 2022-23 | 20 | 51.50 | 14 PCR |
| 3. | 2023-24 | 1 | 5.00 | - |
| ಒಟ್ಟು | | 22 | 57.00 | 14 PCR |

ಅಕ್ರಮ ಮರಳು ಗಣಿಗಾರಿಕೆ:-

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (₹ ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2021-22 | 1 | - | 1 FIR |
| 2. | 2022-23 | 3 | 0.50 | 1 PCR/1 FIR |
| 3. | 2023-24 | 25 | 0.50 | 19 PCR/5 FIR |
| ಒಟ್ಟು | | 29 | 1.00 | 27 |

| | | |
|---|---|---|
| ಇ) | ಅಕ್ರಮ ಗಣಿಗಾರಿಕೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | • ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಐ 21 ಎಂಎಂಎನ್ (2) 2014, ದಿನಾಂಕ 21.01.2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 43 ಮತ್ತು 46 ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ ಪೊಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br><br>• ಅನಧಿಕೃತ ಕಲ್ಲು ಗಣಿಗಾರಿಕೆ / ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸುತ್ತಿದ್ದು, ಅನಧಿಕೃತ ಕಲ್ಲು ಗಣಿಗಾರಿಕೆ/ ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.<br><br>• ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿ ಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿ ಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಕಲ್ಲು ಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್ / ಡಿ.ಜಿ.ಪಿ.ಎಸ್ ಸರ್ವೆ ಕೈಗೊಳ್ಳಲಾಗುತ್ತಿದ್ದು, ಗುತ್ತಿಗೆ ಪ್ರದೇಶದ ಪ್ರಸ್ತುತ ಭೂಮಟ್ಟದ ಅಳತೆಗಳನ್ನು ಘನೀಕರಿಸಲಾಗುತ್ತಿದೆ. ಇದರಿಂದ ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮ ವಹಿಲಾಗುತ್ತಿದೆ. |

. . . 3

| | | |
|---|---|---|
| | | • ಮಂಜೂರಾದ ಗಣಿ/ ಕಲ್ಲು ಗಣಿಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>• ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ.<br>• ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು One State One GPS ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಖನಿಜ ಸಾಗಾಣಿಕಾ ವಾಹನಗಳು GPS ಅಳವಡಿಸಿಕೊಂಡು ಖನಿಜ ಸಾಗಾಣಿಕೆ ಪರವಾನಗಿಯೊಂದಿಗೆ ಸಾಗಾಣಿಕೆ ಮಾಡುವುದನ್ನು ಕಡ್ಡಾಯಗೊಳಿಸಿದೆ. |

ಸಂಖ್ಯೆಸಿಐ -ಎಂಎಂಎನ್/41/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂ ವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.